# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಸರ್ಕಾರದ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯಡಿಯಲ್ಲಿ ಬರುವ ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಜಿಲ್ಲಾ ಮಟ್ಟದ ಕಛೇರಿಗಳಿಗೆ ಸಂಬಂಧಿಸಿದಂತೆ ಜಾಗೃತ ಅಧಿಕಾರಿ(Vigilance Officer) ಗಳನ್ನು ನೇಮಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 14 ಸೇಲೋಯು 2016, ದಿನಾಂಕ: 14.03.2016

2) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 88 ಸೇಲೋಯು 2016, ದಿನಾಂಕ: 22.06.2016

## ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಆದೇಶದನ್ವಯ ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ,1988ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳವನ್ನು (Anti Corruption Bureau) ಸೃಜಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಆದೇಶದನ್ವಯ ಭ್ರಷ್ಟಾಚಾರ ನಿಗ್ರಹ ದಳವನ್ನು ಸೃಜಿಸಿ ಹೊರಡಿಸಿರುವ ಸರ್ಕಾರದ ಆದೇಶದಲ್ಲಿನ ಆದೇಶದ ಭಾಗದ ಕಂಡಿಕೆ 7 ರಲ್ಲಿ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗೂ ಎಲ್ಲಾ ಶಾಸನಬದ್ಧ ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಚಾಲನೆಗೊಳಿಸುವ ನಿಟ್ಟಿನಲ್ಲಿ ಕಾರ್ಯವಿಧಾನ/ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ಸದರಿ ಆದೇಶದ ಭಾಗದ ಕಂಡಿಕೆ-1(3)ರಲ್ಲಿ ಸರ್ಕಾರದ ಪ್ರತಿಯೊಂದು ಕ್ಷೇತ್ರ ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಾಳಿ ಸಂಸ್ಥೆಗಳು ಹಾಗೂ ಶಾಸನಬದ್ಧ ಸಂಸ್ಥೆಗಳು ವಿಭಾಗ ಮತ್ತು ಜಿಲ್ಲಾ ಮಟ್ಟದ ಕಛೇರಿಗಳನ್ನು ಹೊಂದಿದ್ದು, ಸದರಿ ಕಛೇರಿಗಳಲ್ಲಿ ಗಣನೀಯ ಸಿಬ್ಬಂಧಿ (Resonable Strength) ಇದ್ದಲ್ಲಿ, ಆ ವಿಭಾಗ/ಜಿಲ್ಲಾ ಮಟ್ಟದ ಕಛೇರಿಗಳಲ್ಲಿ ಒಂದು ಜಾಗೃತ ಕೋಶ ಇರತಕ್ಕದ್ದೆಂದು ಹಾಗೂ ಸದರಿ ವಿಭಾಗ/ಜಿಲ್ಲಾ ಮಟ್ಟದ ಕಚೇರಿಯ ಮುಖ್ಯಸ್ಥರ ನಂತರದ ಅಧಿಕಾರಿಯನ್ನು (Officer next in seniority) ಸದರಿ ಜಾಗೃತ ಕೋಶದ **ಜಾಗೃತ ಅಧಿಕಾರಿ** (Vigilance Officer)ಯನ್ನಾಗಿ ನೇಮಿಸಲು ಆದೇಶಿಸಲಾಗಿದೆ.

| Director | J.D | AD-Education | AD-Admin | AD-Development |
|---|---|---|---|---|
| 17/12 | | | | |

.....2

ಅದರಂತೆ ಪರಿಶೀಲಿಸಿ ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಜಿಲ್ಲಾ ಮಟ್ಟದ ಕಛೇರಿಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 154 LML 2016, ದಿನಾಂಕ: 05.10.2016**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯದ ಜಿಲ್ಲಾ ಮಟ್ಟದ ಕಛೇರಿಗಳಲ್ಲಿ ಸೀಮಿತ ಅಧಿಕಾರಿ/ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುವುದರಿಂದ ಈ ಜಿಲ್ಲಾ ಮಟ್ಟದ ಕಛೇರಿಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ವಿಭಾಗವಾರು ಜಾಗೃತ ಅಧಿಕಾರಿಗಳನ್ನು ನೇಮಿಸಿ ಆದೇಶಿಸಲಾಗಿದೆ.

| ಕ್ರ.ಸಂ | ವಿಭಾಗ | ಜಾಗೃತ ಅಧಿಕಾರಿ |
|---|---|---|
| 01 | ಬೆಂಗಳೂರು | ಜಂಟಿ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ. |
| 02 | ಕಲಬುರಗಿ | ಸಹಾಯಕ ನಿರ್ದೇಶಕರು-1, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ. |
| 03 | ಬೆಳಗಾವಿ | ಸಹಾಯಕ ನಿರ್ದೇಶಕರು-2, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ. |
| 04 | ಮೈಸೂರು | ಸಹಾಯಕ ನಿರ್ದೇಶಕರು-3, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ. |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಎಂ. ನಾಗರತ್ನ
(ಎಂ.ನಾಗರತ್ನ)
ಸಕಾರದ ಜಂಟಿ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ

**ಇವರಿಗೆ:**

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ

ಗೆ:

01) ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ :5329, ಬೆಂಗಳೂರು-560001
02) ಸರ್ಕಾರದ ಮುಖ್ಯ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ,ವಿಧಾನ ಸೌಧ,ಬೆಂಗಳುರು